**Akashvani : Bangalore**
**Regional Bulletin In Kannada**

**23.12.2024** **14.30 hrs**

ಮುಖ್ಯಾಂಶಗಳು

**೧. ರಾಜ್ಯದ ವಿವಿಧ ಕೈಗಾರಿಕಾ ವಲಯಗಳ ೬ ಸಾವಿರದ ೮೨೩ ಕೋಟಿ ಮೊತ್ತದ ಹತ್ತು ಪ್ರಸ್ತಾವನೆಗಳಿಗೆ ಸರ್ಕಾರ ಅನುಮೋದನೆ**

**೨. ಬೆಂಗಳೂರಿನಲ್ಲಿ ಬಿಎಸ್‌ಎಫ್ ಯಲಹಂಕ ಕೇಂದ್ರದಲ್ಲಿ ಉದ್ಯೋಗಮೇಳ; ೨೪೭ ನೇಮಕಾತಿ ಪತ್ರ ವಿತರಿಸಿದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ**

**೩. ಭದ್ರಾವತಿ ಉಕ್ಕು ಕಾರ್ಖಾನೆ ಡಿಪಿಆರ್‌ಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸೂಚನೆ**

**೪. ಪರಿಷತ್ ಸದಸ್ಯ ಸಿ.ಟಿ.ರವಿ ಮೇಲಿನ ಹಲ್ಲೆ ಪ್ರಕರಣ; ಹತ್ತು ಮಂದಿ ವಿರುದ್ಧ ಎಫ್‌ಐಆರ್ ದಾಖಲು**

**೫. ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಸಿದ್ಧತೆ ಪರಿಶೀಲಿಸಿದ ಕಾಂಗ್ರೆಸ್ ಮುಖಂಡರು**

**<><*<><>*><>**

ರಾಜ್ಯದ ವಿವಿಧ ಕೈಗಾರಿಕಾ ವಲಯಗಳಲ್ಲಿ ಒಟ್ಟು. ೬ ಸಾವಿರದ ೮೨೩ ಕೋಟಿ ಮೊತ್ತದ ೧೦ ಪ್ರಸ್ತಾವನೆಗಳಿಗೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿ ನಡೆದ ರಾಜ್ಯದ ಉನ್ನತ ಮಟ್ಟದ ೬೪ನೇ ಒಪ್ಪಿಗೆ ನೀಡಿಕೆ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಕೋಚನಹಳ್ಳಿಯ ಎಲೆಕ್ಟ್ರಾನಿಕ್ಸ್ ಮ್ಯಾನುಫಾಕ್ಚರಿಂಗ್ ಕ್ಲಸ್ಟರ್ ನಲ್ಲಿ ಸೆಮಿಕಂಡಕ್ಟರ್ ವಲಯದಲ್ಲಿ ೩ ಸಾವಿರದ ೪೨೫ ಕೋಟಿ ವೆಚ್ಚದ ಪ್ರಥಮ ಯೋಜನೆಗೆ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಸಕ್ಕರೆ ಕಾರ್ಖಾನೆಗಳು ಉಪ ಉತ್ಪನ್ನಗಳ ಉತ್ಪಾದನೆ ಸಂದರ್ಭದಲ್ಲಿ ರೈತರಿಗೂ ಲಾಭಾಂಶದಲ್ಲಿ ಪಾಲು ನೀಡುವ ಕುರಿತು ಪರಿಶೀಲನೆ ನಡೆಸಬೇಕು. ಮಹಾರಾಷ್ಟ್ರ ಮತ್ತು ತಮಿಳುನಾಡಿನಲ್ಲಿ ಈ ಕುರಿತು ಅನುಸರಿಸುತ್ತಿರುವ ನಿಯಮಗಳನ್ನು ಪರಿಶೀಲಿಸಲು ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ. ಕೆಐಎಡಿಬಿಯಿಂದ ಕೈಗಾರಿಕೆಗಳನ್ನು ಆರಂಭಿಸಲು ಜಮೀನು ಪಡೆಯುವ ಕಂಪೆನಿಗಳು ನಿಗದಿತ ಅವಧಿಯಲ್ಲಿ ಕೈಗಾರಿಕೆಯನ್ನು ಆರಂಭಿಸದಿದ್ದರೆ ದಂಡ ವಿಧಿಸುವುದು. ಸರ್ಕಾರದ ನಿಯಮಾವಳಿಗೆ ಅನುಸಾರವಾಗಿ ಕೈಗಾರಿಕೆಗಳು ಕಾರ್ಯನಿರ್ವಹಿಸುವುದನ್ನು ಖಾತ್ರಿಪಡಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><*<><>*><>

ದೆಹಲಿ ಸೇರಿದಂತೆ ದೇಶದ ಪ್ರಮುಖ ೪೫ ಸ್ಥಳಗಳಲ್ಲಿ ಇಂದು ಉದ್ಯೋಗ ಮೇಳ ನಡೆಯಿತು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು, ವೀಡಿಯೋ ಕಾನ್ಫರೆನ್ಸ್ ಮೂಲಕ ಹೊಸದಾಗಿ ನೇಮಕಗೊಂಡವರಿಗೆ ೭೧ ಸಾವಿರ ನೇಮಕಾತಿ ಪತ್ರ ವಿತರಿಸಿದ್ದಾರೆ. ಬೆಂಗಳೂರಿನ ಯಲಹಂಕದಲ್ಲಿ ಗೃಹ ಇಲಾಖೆಯ ಗಡಿ ಭದ್ರತಾಪಡೆ ಆಯೋಜಿಸಿದ್ದ ೧೪ನೇ ರೋಜ್‌ಗಾರ್ ಮೇಳದಲ್ಲಿ ಕೇಂದ್ರ ಸಚಿವೆ ಶೋಭಾಕರಂದ್ಲಾಜೆ ೨೪೭ ನೇಮಕಾತಿ ಪತ್ರಗಳನ್ನು ವಿತರಿಸಿದರು. ಕರ್ನಾಟಕಟದಲ್ಲಿ ವಿವಿಧ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳು ನೇಮಕಾತಿ ಪತ್ರ ಸ್ವೀಕರಿಸಿದರು. BSF -80, CRPF -75, SSB- 08, ITBP -19, BEML-05, IIM -11, RAILWAY -10, ಅಂಚೆ ಇಲಾಖೆ -10, SBI- 8 ಸೇರಿದಂತೆ ಹಲವು ಇಲಾಖೆಗಳಿಗೆ ನೇಮಕಾತಿ ಪ್ರತ ನೀಡಲಾಗಿದೆ.

<><*<><>*><>

ರಾಜ್ಯದ ಪೊಲೀಸ್ ಇಲಾಖೆ ಕೆಲ ಸಚಿವರ ಹಿಡಿತದಲ್ಲಿ ಕಾರ್ಯ ನಿರ್ವಹಿಸುತ್ತಿದೆ ಎಂದು ಕೇಂದ್ರದ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ ಕುಮಾರಸ್ವಾಮಿ ಆರೋಪಿಸಿದ್ದಾರೆ. ಹಾಸನ ಜಿಲ್ಲೆಯ ಹರದನಹಳ್ಳಿ ಮಾವಿನಕೆರೆ ರಂಗನಾಥ ಸ್ವಾಮಿ ದೇವಾಲಯದಲ್ಲಿ ಇಂದು ವಿಶೇಷ ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದ ಅವರು, ಪರಿಷತ್ ಸದಸ್ಯ ಸಿಟಿ ರವಿ ಅವರನ್ನು ರಾತ್ರಿಯಿಡೀ ಸುತ್ತಾಡಿಸುವ ಅಗತ್ಯ ಇರಲಿಲ್ಲ. ನೇರವಾಗಿ ಜನಪ್ರತಿನಿಧಿಗಳ ಕೋರ್ಟ್‌ಗೆ ಹಾಜರುಪಡಿಸಬಹುದಿತ್ತು ಎಂದು ತಿಳಿಸಿದ್ದಾರೆ. ಇದೇ ವೇಳೆ ಶಿವಮೊಗ್ಗ ಜಿಲ್ಲೆಯ ಭದ್ರಾವತಿ ಕಾರ್ಖಾನೆ ಡಿಪಿಆರ್ ಮಾಡಲು ಸೂಚನೆ ನೀಡಲಾಗಿದೆ. ಭಾರತದಲ್ಲಿ ಇರುವ ವಿ.ಎಸ್.ಎಲ್, ತಮಿಳುನಾಡಿನ ಸೇಲಂ ಪ್ಲಾಂಟ್ ಎರಡಕ್ಕೂ ಪುನಶ್ಚೇತನ ಕಲ್ಪಿಸಲು ಹಲವು ಸಭೆಗಳನ್ನು ಮಾಡಲಾಗಿದೆ ಈ ನಿಟ್ಟಿನಲ್ಲಿ ಡಿಪಿಆರ್ ಕೂಡ ತಯಾರಾಗುತ್ತಿದೆ ಎಂದರು.

**ಧ್ವನಿ: ಎಚ್.ಡಿ.ಕುಮಾರ್‌ಸ್ವಾಮಿ**

<><*<><>*><>

ಬೆಳಗಾವಿಯ ಸುವರ್ಣಸೌಧದಲ್ಲಿ ಬಿಜೆಪಿ ಪರಿಷತ್ ಸದಸ್ಯ ಸಿ.ಟಿ.ರವಿ ಮೇಲೆ ಹಲ್ಲೆಗೆ ಯತ್ನಿಸಿದ ಆರೋಪಿಗಳ ವಿರುದ್ಧ ಬೆಳಗಾವಿಯ ಹಿರೇಬಾಗೆವಾಡಿ ಠಾಣೆಯಲ್ಲಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಆಪ್ತ ಸೇರಿ ಹತ್ತು ಮಂದಿ ವಿರುದ್ಧ ಪ್ರಕರಣ ದಾಖಲಾಗಿದೆ. ಖಾನಪೂರ ಪೊಲೀಸ್ ಠಾಣೆಯಲ್ಲಿ ಸಿ.ಟಿ.ರವಿ ಲಿಖಿತ ದೂರು ನೀಡಿದ್ದರು. ಅಂಚೆ ಮೂಲಕ ಹಿರೇಬಾಗೆವಾಡಿ ಪೊಲೀಸರಿಗೆ ಸಿ.ಟಿ.ರವಿ ದಾಖಲಿಸಿದ್ದ ದೂರು ಕೈಸೇರಿದ ಹಿನ್ನೆಲೆಯಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ.

<><*<><>*><>

ಸದನದಲ್ಲಿ ಪರಿಷತ್ ಸದಸ್ಯ ಸಿ.ಟಿ.ರವಿ ಬಳಸಿದ ಆಕ್ಷೇಪಾರ್ಹ ಪದ ಕುರಿತಂತೆ ಸೂಕ್ತ ತನಿಖೆ ನಡೆಸಿ ಕಾನೂನಾತ್ಮಕ ಕ್ರಮಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಮನವಿ ಮಾಡುವುದಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸದನದಲ್ಲಿ ಒಬ್ಬ ಮಹಿಳೆಗೆ ಆದ ಅವಮಾನವನ್ನು ಒಬ್ಬರೂ ಖಂಡಿಸದೆ ಇರುವುದು ಮತ್ತು ಸಿ.ಟಿ. ರವಿ ಅವರ ಬೆಂಬಲಕ್ಕೆ ನಿಂತಿರುವುದು  ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಸದನದಲ್ಲಿ ನಡೆದ ಘಟನೆಯ ಬಗ್ಗೆ ತಾವೂ ಸಾಕ್ಷ್ಯ ಒದಗಿಸಿ, ನ್ಯಾಯ ದೊರಕುವವರೆಗೆ ಹೋರಾಟ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಇದೇ ೨೬ , ೨೭ ರಂದು ಬೆಳಗಾವಿಯಲ್ಲಿ ನಡೆಯಲಿರುವ  ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಸಮಾರಂಭದ ಸಿದ್ದತೆಯನ್ನು  ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್ ವೀಕ್ಷಿಸಿದರು. ಇದಕ್ಕೂ ಮೊದಲು ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸುರ್ಜೇವಾಲಾ ಅವರು, ಬೆಳಗಾವಿ ಭಾರತದ ಅವಿಸ್ಮರಣೀಯ ಸ್ಥಳವಾಗಿದೆ. ದೇಶದಲ್ಲಿ ಹೊಸ ಆಂದೋಲನಕ್ಕೆ ಬೆಳಗಾವಿಯಿಂದಲೇ ಗಾಂಧೀಜಿ ಚಾಲನೆ ನೀಡಿದ್ದರು ಎಂದು ತಿಳಿಸಿದ್ದಾರೆ.  ಇದೇ ವೇಳೆ "ಬೆಳಗಾವಿ ಅಧಿವೇಶನದ ಶತಮಾನೋತ್ಸವ ಆಚರಣೆ ಐತಿಹಾಸಿಕ ಕಾರ್ಯಕ್ರಮವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಇದು ಸಂಪೂರ್ಣ ಸರ್ಕಾರಿ ಕಾರ್ಯಕ್ರಮವಾಗಿದ್ದು  ಭದ್ರತಾ ದೃಷ್ಟಿಯಿಂದ ಈ ಕಾರ್ಯಕ್ರಮಕ್ಕೆ ಸಾರ್ವಜನಿಕರಿಗೆ ಆಹ್ವಾನ ಇರುವುದಿಲ್ಲ ಎಂದು ಹೇಳಿದ್ದಾರೆ. ಬೆಳಗಾವಿಯಲ್ಲಿರುವ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಇತರೆ ವಿಶೇಷ ಅತಿಥಿಗಳಿಗೆ ಆಹ್ವಾನ ನೀಡಲಾಗುವುದು" ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಪಂಚ ಖಾತರಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳ್ಳುವುದಿಲ್ಲ ಎಂದು ಮೈಸೂರು  ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ತಿಳಿಸಿದ್ದಾರೆ. ಮೈಸೂರಿನ ಸಮಾಜ ಕಲ್ಯಾಣ ಇಲಾಖೆ ಕಚೇರಿ ಆವರಣದಲ್ಲಿ ನಿರ್ಮಿಸಿರುವ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನರಾಂ ಅವರ ಪ್ರತಿಮೆಯನ್ನು ಅನಾವರಣ ಗೊಳಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರ ನೀಡಿದ ಭರವಸೆಯಂತೆ ಯೋಜನೆಗಳು ಮುಂದುವರಿಯಲಿವೆ. ಇದರಲ್ಲಿ

ಯಾವುದೇ ರೀತಿಯ ಅನುಮಾನವಿಲ್ಲ ಎಂದು ಹೇಳಿದರು. ಮೈಸೂರಿನ ಸಮಾಜ ಕಲ್ಯಾಣ ಇಲಾಖೆಯ ಕಚೇರಿಯನ್ನು ಆಧುನೀಕರಣಗೊಳಿಸಲಾಗುತ್ತಿದ್ದು, ಅಧಿಕಾರಿಗಳು ಉತ್ತಮವಾಗಿ ಕಾರ್ಯನಿರ್ವಹಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

<><*<><>*><>

ಮಂಡ್ಯ ಜಿಲ್ಲೆಯಲ್ಲಿ ಆಯೋಜಿಸಿದ್ದ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ತೆರೆಬಿದ್ದಿದ್ದು, ಕನಿಷ್ಠ ಏಳು ಲಕ್ಷ ಜನ ಭಾಗಿಯಾಗಿದ್ದಾರೆ ಎಂದು ಅಂದಾಜಿಸಲಾಗಿದೆ. ಸಮ್ಮೇಳನದ ಎರಡನೇ ದಿನ ರಸಸಂಜೆ ಕಾರ್ಯಕ್ರಮದಲ್ಲಿ ಎರಡು ಲಕ್ಷ ಜನ ಭಾಗಿಯಾಗಿದ್ದರು. ಆರು ಲಕ್ಷ ಜನರು ಸಮ್ಮೇಳನದಲ್ಲಿ ಊಟ ಸವಿದಿದ್ದಾರೆ.

<><*<><>*><>

ಇಂದು ರಾಷ್ಟ್ರೀಯ ರೈತರ ದಿನ. ಮಾಜಿ ಪ್ರಧಾನಿ ಚೌಧರಿ ಚರಣ್ ಸಿಂಗ್ ಅವರ ಜನ್ಮದಿನವನ್ನು ರೈತರ ದಿನವನ್ನಾಗಿ ಆಚರಿಸಲಾಗುತ್ತಿದೆ. ೧೯೭೯ರಲ್ಲಿ ಪ್ರಧಾನಿಯಾಗಿ ಜವಾಬ್ದಾರಿ ವಹಿಸಿದ್ದ ಸಿಂಗ್ ಅವಧಿಯಲ್ಲಿ ರೈತರ ಕಲ್ಯಾಣಕ್ಕೆ ಅವರು ತಂದ ಯೋಜನೆಗಳು ಇಂದಿಗೂ ಜನಪ್ರಿಯ. ರೈತರ ಪರವಾಗಿ, ರೈತ ಸ್ನೇಹಿ ಯೋಜನೆಗಳನ್ನು ಜಾರಿಗೆ ತಂದ ನೆನಪಿಗಾಗಿ ಅವರ ಜನ್ಮದಿನದಂದು ರೈತರ ದಿನವನ್ನಾಗಿ ಆಚರಿಸಲಾಗುತ್ತಿದೆ. ರೈತರೇ ದೇಶದ ಬೆನ್ನೆಲುಬಾಗಿದ್ದು, ಪ್ರಧಾನಿ ಸೇರಿದಂತೆ ಹಲವು ಗಣ್ಯರು ಶುಭಾಶಯ ಕೋರಿದ್ದಾರೆ.

<><*<><>*><>

ಕ್ರಿಸ್ ಮಸ್ ಹಬ್ಬದ ಪ್ರಯುಕ್ತ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಯಂತ್ರಿಸಲು ನೈಋತ್ಯ ರೈಲ್ವೆಯು ಬೆಂಗಳೂರಿನ ಸರ್ ಎಂ.ವಿಶ್ವೇಶ್ವರಯ್ಯ ಟರ್ಮಿನಲ್‌ನಿಂದ ಬೆಂಗಳೂರು-ಕಲಬುರಗಿ ನಿಲ್ದಾಣಗಳ ನಡುವೆ ಎರಡು ಟ್ರಿಪ್ ವಿಶೇಷ ಎಕ್ಸ್ ಪ್ರೆಸ್ ರೈಲುಗಳನ್ನು ಓಡಿಸಲು ನಿರ್ಧರಿಸಿದೆ. ಇದೇ ವೇಳೆ ಬೆಂಗಳೂರು-ತಿರುವನಂತಪುರಂ ಉತ್ತರ ನಿಲ್ದಾಣಗಳ ನಡುವೆ ಒಂದು ಟ್ರಿಪ್ ವಿಶೇಷ ಎಕ್ಸ್ ಪ್ರೆಸ್ ರೈಲು ಸಂಚರಿಸಲಿದೆ. ಈ ರೈಲುಗಳ ಹೆಚ್ಚಿನ ಮಾಹಿತಿಯನ್ನು, ಪ್ರಯಾಣಿಕರು ಭಾರತೀಯ ರೈಲ್ವೆಯ ವೆಬ್ ಸೈಟ್‌ಗೆ ಭೇಟಿ ನೀಡಿ, ಇಲ್ಲವೆ ೧೩೯ ಸಂಖ್ಯೆಗೆ ಡಯಲ್ ಮಾಡಿ ಮಾಹಿತಿ ಪಡೆದುಕೊಳ್ಳಬಹುದು ಎಂದು ನೈಋತ್ಯ ರೈಲ್ವೆ ತಿಳಿಸಿದೆ.

<><*<><>*><>

ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧವಾಗಿದೆ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ತಿಳಿಸಿದ್ದಾರೆ. ಚಿತ್ರದುರ್ಗ ತಾಲ್ಲೂಕಿನ ಜೋಡಿಚಿಕ್ಕೇನಹಳ್ಳಿ ಗೊಲ್ಲರಹಟ್ಟಿ ಗ್ರಾಮದಲ್ಲಿ ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಬಾಲ್ಯವಿವಾಹ ತಡೆಗಟ್ಟುವಿಕೆ

ಕುರಿಂತೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಇದರ ವಿರುದ್ಧ ಜಾಗೃತಿ ಮೂಡಿಸುವುದು ಅತ್ಯಗತ್ಯವಾಗಿದೆ ಎಂದು ಹೇಳಿದ್ದಾರೆ. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಶಿಕ್ಷಣದ ಕೊರತೆಯಿಂದಾಗಿ ಇಂತಹ ಪಿಡುಗುಗಳು ಸಮಾಜದಲ್ಲಿ ಇಂದಿಗೂ ಜೀವಂತವಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ೧೦೦ ದಿನಗಳ ಕ್ಷಯರೋಗ ನಿಯಂತ್ರಣ ಅಭಿಯಾನದ ಕುರಿತು ಮಾಹಿತಿ ನೀಡಿದರು.

**<><*<><>*><>**

ಇನ್ನು ಸಂಕ್ಷಿಪ್ತಸುದ್ದಿ...

೧. ದುಡಿಯುವ ಕೈಗಳಿಗೆ ಕೆಲಸ ನೀಡಿ, ಆರ್ಥಿಕ ಅಭಿವೃದ್ಧಿಯೊಂದಿಗೆ ಗ್ರಾಮೀಣ ಪ್ರದೇಶಗಳ ಸಮಗ್ರ ಸಬಲೀಕರಣಕ್ಕೆ ನೆರವಾಗುವ ನಿಟ್ಟಿನಲ್ಲಿ ನರೇಗಾ ಯೋಜನೆಯನ್ನು ಗ್ರಾಮೀಣ ಜನರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕಾರವಾರದ ಕೋಡಂಬಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸಂಜೀವಯ್ಯ ಹಿರೇಮಠ್ ತಿಳಿಸಿದ್ದಾರೆ.

೨. ಬೆಂಗಳೂರಿನಿಂದ ಹೊರನಾಡಿಗೆ ಪ್ರವಾಸಕ್ಕೆ ಹೊರಟಿದ್ದ ಟಿ.ಟಿ ವಾಹನ ಅಪಘಾತಕೀಡಾಗಿ ಹಲವರಿಗೆ ಗಾಯಗಳಾಗಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ಜಾವಳಿ ಗ್ರಾಮದ ಬಳಿ ಇಂದು ಸಂಭವಿಸಿದೆ. ಅಪಘಾತದಲ್ಲಿ ನಾಲ್ವರಿಗೆ ಗಂಭೀರ ಗಾಯಗಳಾಗಿವೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**